ಕನ್ನಡಪ್ರಭ

# ವಿಜಯಪುರ ಸಿಕ್ಯಾಬ್ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ

**ವಿಜಯಪುರ:** ನಗರದ ಸಿಕ್ಯಾಬ್ ತಾಂತ್ರಿಕ ಮತ್ತು ಅಭಿಯಾಂತ್ರಿಕ ಮಹಾವಿದ್ಯಾಲಯದಲ್ಲಿ ಗುರುವಾರ ಸಿವಿಲ್ ಎಂಜಿನಿಯರಿಂಗ್ ವಿಭಾಗದ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಪ್ರಾಂಶುಪಾಲ ಡಾ. ಎಸ್.ಜಿ. ಅರ್ವಿಕರ್ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕನ್ನಡ ಭಾಷೆ, ಕನ್ನಡ ನೆಲದ ಬಗೆಗಿನ ಅಭಿಮಾನ ರಾಜ್ಯೋತ್ಸವ ದಿನದಂದಷ್ಟೇ ಸೀಮಿತವಾಗಬಾರದು ಎಂದು ಹೇಳಿದರು. ಯಾಂತ್ರಿಕ ವಿಭಾಗದ ಮುಖ್ಯಸ್ಥ ಡಾ. ಅಬ್ಬಾಸ್ ಅಲಿ ಮಾತನಾಡಿ, ಕನ್ನಡ ನಾಡು ಕಟ್ಟಿಬೆಳೆಸಿದ ಸಾಹಿತಿಗಳನ್ನು ನೆನೆದು, ಬೇರೆ ರಾಜ್ಯಗಳಿಗೆ ಹೋಲಿಸಿದರೆ ಎಲ್ಲ ಸ್ತರಗಳಲ್ಲಿ ಕರ್ನಾಟಕ ಅತ್ಯಂತ ಸುಧಾರಿತ ರಾಜ್ಯ ಎಂಬುದು ನಮಗೆಲ್ಲರಿಗೂ ಹೆಮ್ಮೆ, ಇದನ್ನು ಕಾಪಾಡಿಕೊಂಡು ಹೋಗುವುದು ನಮ್ಮೆಲ್ಲರ ಹೊಣೆ ಎಂದು ಹೇಳಿದರು. ಸಿವಿಲ್ ವಿಭಾಗದ ಪ್ರಾಧ್ಯಾಪಕ ಜಿ.ವಿ. ನಂದಿ ಮಾತನಾಡಿದರು. ಉಪಪ್ರಾಂಶುಪಾಲ ಹಾಗೂ ಕಂಪ್ಯೂಟರ್ ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ನೂರುಲ್ಲಾ ಶರೀಫ, ಪ್ರಾಧ್ಯಾಪಕ ವಿ.ಎಸ್. ಡೊಳ್ಳಿ, ಪ್ರೊ. ಎಂ.ಎಚ್. ಕೊಲ್ಹಾರ್, ಸುಪ್ರಿಯಾ ವಿ.ಕೆ., ಎ.ಎ. ಜಹಗೀರದಾರ್, ಪಿ. ಶಾಬಾಷಾ ಮುಂತಾದವರು ಉಪಸ್ಥಿತರಿದ್ದರು. ಪ್ರಾಧ್ಯಾಪಕ ನೂರುದ್ದಿನ್ ಜಂಗಿ ಖಾದ್ರಿ ಸ್ವಾಗತಿಸಿದರು. ಮಲ್ಲಿಕಾರ್ಜುನ್ ಆಸಂಗಿಹಾಳ ನಿರೂಪಿಸಿದರು.

Vijapura Edition
5 Nov, 2018 Page No. 1
Powered by : eReleGo.com

# ಕನ್ನಡ ಜೀವನ ಭಾಷೆಯಾಗಿದೆ: ಹುಳಿಯಾರ

**ವಿಕ ಸುದ್ದಿಲೋಕ** ವಿಜಯಪುರ

ಕನ್ನಡ ಕೇವಲ ಕಾವ್ಯ ಭಾಷೆಯಲ್ಲ, ಅದು ಜನರ ಜೀವನದ ಭಾಷೆಯಾಗಿ ಬೆಳೆಯುತ್ತಾ ಬಂದಿದೆ ಎಂದು ಬೆಂಗಳೂರು ವಿವಿಯ ಗಾಂಧಿ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ.ನಟರಾಜ ಹುಳಿಯಾರ ಹೇಳಿದರು.

ಇಲ್ಲಿನ ಅಕ್ಕಮಹಾದೇವಿ ಮಹಿಳಾ ವಿವಿಯ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ದೈಹಿಕ ಶಿಕ್ಷಣ ನಿರ್ದೇಶನಾಲಯದ ವತಿಯಿಂದ 63ನೇ ಕರ್ನಾಟಕ ರಾಜ್ಯೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು. ಕನ್ನಡ ಭಾಷೆಯಲ್ಲಿ ಏನನ್ನಾದರೂ ನುಡಿಸಬಹುದು, ಅದು ಜ್ಞಾನದ ಭಾಷೆ, ಜನಪದ ಸಾಹಿತ್ಯದ ಭಾಷೆ, ಸಂಪ್ರದಾಯಗಳ ಭಾಷೆ, ಸ್ನೇಹ ಸಾಮರಸ್ಯದ ಭಾಷೆಯಾಗಿದೆ ಎಂದು ಹೇಳಿದರು.

ಕನ್ನಡ ಮಾಧ್ಯಮದ ವಿದ್ಯಾರ್ಥಿಗಳು ಇಂಗ್ಲಿಷ್ ಭಾಷೆಯನ್ನು ಬಳಸುತ್ತಾರೆ. ಆದರೆ ಇಂಗ್ಲಿಷ್ ಮಾಧ್ಯಮದ ವಿದ್ಯಾರ್ಥಿಗಳು ಕನ್ನಡವನ್ನು ಹೆಚ್ಚಾಗಿ ಬಳಸದಿರುವುದರಿಂದ ಕನ್ನಡ ಭಾಷೆ ಬಡವಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ಕನ್ನಡ ಏಕೀಕರಣ ಎನ್ನುವುದು ಸಾಮಾನ್ಯ ವಲಯದಿಂದ ಬಂದಿದ್ದರೂ ರಾಜಕೀಯ ಮೂಲದಿಂದ ನಡೆಯುತ್ತಿದೆ ಎಂದು ತಿಳಿಸಿದರು.

ಅಕ್ಕಮಹಾದೇವಿ ವಿವಿಯ ಕುಲಪತಿ ಪ್ರೊ.ಸಬಿಹಾ ಅಧ್ಯಕ್ಷತೆ ವಹಿಸಿ, ಕನ್ನಡದ ಬಗ್ಗೆ ನಮ್ಮ ಆಲೋಚನೆ, ಬದುಕು, ಬರಹಗಳು ಕೆಲವು ಸಂದರ್ಭಗಳಲ್ಲಿ ಮಾತ್ರ ಬಳಸುವ ಬದಲು ಉಸಿರಾಟದ ಹಾಗೆ ಪ್ರತಿಕ್ಷಣ ಕನ್ನಡವನ್ನು ಬಳಸಬೇಕು ಎಂದು ಹೇಳಿದರು.

ಮಹಿಳಾ ವಿವಿ ಕುಲಸಚಿವೆ ಪ್ರೊ.ಆರ್.ಸುನಂದಮ್ಮ, ಆರ್ಥಿಕ ಅಧಿಕಾರಿ ಪ್ರೊ.ಪಿ.ಜಿ.ತಡಸದ ವೇದಿಕೆಯಲ್ಲಿದ್ದರು. ಪ್ರದರ್ಶಕ ಕಲೆಗಳ ವಿಭಾಗದ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ದೈಹಿಕ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕ ಪ್ರೊ.ಎನ್.ಚಂದ್ರಪ್ಪ ಸ್ವಾಗತಿಸಿದರು. ದೈಹಿಕ ಶಿಕ್ಷಣ ವಿಭಾಗದ ಪ್ರಾಧ್ಯಾಪಕ ಡಾ.ಕೆ.ಪಿ.ಮಾರ್ಟಿನ್ ಪರಿಚಯಿಸಿದರು. ದೈಹಿಕ ಶಿಕ್ಷಣ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಹನುಮಂತಯ್ಯ ಪೂಜಾರಿ ನಿರೂಪಿಸಿದರು. ಡಾ.ಜ್ಯೋತಿ ಉಪಾಧ್ಯೆ ವಂದಿಸಿದರು.

**ಧ್ವಜಾರೋಹಣ :** ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದಲ್ಲಿ ದೈಹಿಕ ಶಿಕ್ಷಣ ನಿರ್ದೇಶನಾಲಯದ ವತಿಯಿಂದ ಹ್ಮಮಿಕೊಂಡಿದ್ದ 63ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಹಿಳಾ ವಿವಿ ಕುಲಪತಿ ಪ್ರೊ. ಸಬಿಹಾ ಧ್ವಜಾರೋಹಣ ನೆರವೇರಿಸಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಂಗೀತ ವಿಭಾಗದ ವಿದ್ಯಾರ್ಥಿನಿಯರು ನಾಡಗೀತೆ ಹಾಡಿದರು.

**ಸಿಕ್ಯಾಬ್ ತಾಂತ್ರಿಕ ಕಾಲೇಜ್:** ನಗರದ ಸಿಕ್ಯಾಬ್ ತಾಂತ್ರಿಕ ಮತ್ತು ಅಭಿಯಾಂತ್ರಿಕ ಮಹಾವಿದ್ಯಾಲಯದಲ್ಲಿ ಸಿವಿಲ್ ಎಂಜಿನಿಯರಿಂಗ್ ವಿಭಾಗದ ವತಿಯಿಂದ ಕನ್ನಡ ರಾಜ್ಯೋತ್ಸವ ಸಂಭ್ರಮದಿಂದ ಆಚರಿಸಲಾಯಿತು.

ಪ್ರಾಚಾರ್ಯ ಡಾ.ಎಸ್.ಜಿ.ಅರ್ವಿಕರ್ ಅಧ್ಯಕ್ಷತೆವಹಿಸಿ, ಧ್ವಜಾರೋಹಣ ನೆರವೇರಿಸಿದರು. ಅತಿಥಿಗಳಾಗಿ ಉಪಪ್ರಾಚಾರ್ಯ ಹಾಗೂ ಕಂಪ್ಯೂಟರ್ ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ.ನೂರುಲ್ಲಾ ಶರೀಫ್ ಮತ್ತು ಯಾಂತ್ರಿಕ ವಿಭಾಗದ ಮುಖ್ಯಸ್ಥ ಡಾ.ಅಬ್ಬಾಸ್ ಅಲಿ ಇದ್ದರು. ಡಾ.ಅಬ್ಬಾಸ್ ಅಲಿ ಹಾಗೂ ಸಿವಿಲ್ ವಿಭಾಗದ ಪ್ರಾಧ್ಯಾಪಕ ಜಿ.ವಿ.ನಂದಿ ಮಾತನಾಡಿದರು. ವಿಭಾಗದ ಹಿರಿಯ ಪ್ರಾಧ್ಯಾಪಕ ವಿ.ಎಸ್.ಡೊಳ್ಳಿ ದ.ರಾ.ಬೇಂದ್ರೆಯವರ ಬರೆದ 'ಮೂಡಲ ಮನೆಯ ಮುತ್ತಿನ ನೀರಿನ'ಹಾಡನ್ನು ಹಾಡಿ ಎಲ್ಲರನ್ನು ರಂಜಿಸಿದರು. ವಿದ್ಯಾರ್ಥಿನಿಯರಾದ ಅನುಷಾ, ಪಂಕಜಾ ಮತ್ತು ಸಹಪಾಠಿಗಳು ನಾಡಗೀತೆ ಹಾಡಿದರು. ವಿಭಾಗದ ಮುಖ್ಯಸ್ಥರಾದ ಪ್ರೊ.ಎಂ.ಎಚ್.ಕೊಲ್ಹಾರ್, ಸುಪ್ರಿಯಾ ವಿ.ಕೆ, ಪ್ರೊ.ಎ.ಎ.ಜಹಾಗೀರದಾರ್, ಪ್ರೊ.ಪಿ.ಶಾಬಾಷಾ, ಪ್ರಾಧ್ಯಾಪಕ ನೂರುದ್ದಿನ್ ಜಂಗಿ ಖಾದ್ರಿ ಮತ್ತು ವಿಭಾಗದ ಎಲ್ಲ ಸಹ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಇದ್ದರು.



ವಿಜಯಪುರ ಅಕ್ಕಮಹಾದೇವಿ ಮಹಿಳಾ ವಿವಿಯ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ದೈಹಿಕ ಶಿಕ್ಷಣ ನಿರ್ದೇಶನಾಲಯದ ವತಿಯಿಂದ ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನುದ್ದೇಶಿಸಿ ಬೆಂಗಳೂರು ವಿವಿಯ ಗಾಂಧಿ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ.ನಟರಾಜ ಹುಳಿಯಾರ ಮಾತನಾಡಿದರು.



ವಿಜಯಪುರದ ಸಿಕ್ಯಾಬ್ ತಾಂತ್ರಿಕ ಮತ್ತು ಅಭಿಯಾಂತ್ರಿಕ ಮಹಾವಿದ್ಯಾಲಯದಲ್ಲಿ ಸಿವಿಲ್ ಎಂಜಿನಿಯರಿಂಗ್ ವಿಭಾಗದಿಂದ ಕನ್ನಡ ರಾಜ್ಯೋತ್ಸವ ಸಂಭ್ರಮದಿಂದ ಆಚರಿಸಲಾಯಿತು.



ವಿಜಯಪುರ ನಗರದ ಸರಸ್ವತಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.